## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 909
2. ಸದಸ್ಯರ ಹೆಸರು : ಶ್ರೀ ವಿಜಯ ಸಿಂಗ್
3. ಉತ್ತರಿಸಬೇಕಾದ ದಿನಾಂಕ : 28.09.2020
4. ಉತ್ತರಿಸುವ ಸಚಿವರು : ಕಾರ್ಮಿಕ ಮತ್ತು ಸಕ್ಕರೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಸರ್ಕಾರದ ನಿಲುವೇನು; | ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ನಿ., ಹಳ್ಳಿಖೇಡ್ ಹುಮನಾಬಾದ್ ತಾಲ್ಲೂಕು, ಬೀದರ್ ಜಿಲ್ಲೆ ಈ ಕಾರ್ಖಾನೆಯು ದುಡಿಯುವ ಬಂಡವಾಳದ ಕೊರತೆ ಮತ್ತು ಆಡಳಿತಾತ್ಮಕ ಅನಾನುಕೂಲಗಳಿಂದಾಗಿ 2019-20ನೇ ಹಂಗಾಮಿನಲ್ಲಿ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಬೀದರ್ ಸಕ್ಕರೆ ಕಾರ್ಖಾನೆ ಸ್ಥಗಿತಗೊಂಡು ಲಕ್ಷಾಂತರ ರೈತ ಹಾಗೂ ಕಾರ್ಮಿಕ ಕುಟುಂಬದವರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ನೀಡಲಾದ ಪರಿಹಾರ ಏನು; | ಕಾರ್ಖಾನೆಯು ಸ್ಥಗಿತಗೊಂಡಿರುವುದರಿಂದ ಈ ಕಾರ್ಖಾನೆಯ ಕಾರ್ಯವ್ಯಾಪ್ತಿಯಲ್ಲಿ ಬೆಳೆದಂತಹ ಕಬ್ಬನ್ನು ನೆರೆಯ ಸಕ್ಕರೆ ಕಾರ್ಖಾನೆಗಳಿಗೆ ಹಂಚಿಕೆ ಮಾಡುವುದರ ಮೂಲಕ ರೈತರ ಕಬ್ಬನ್ನು ಸಕಾಲಕ್ಕೆ ನುರಿಸುವ ವ್ಯವಸ್ಥೆಯನ್ನು ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ಇವರು ಮಾಡಿರುತ್ತಾರೆ. ರೈತರಿಗೆ ಇದರಿಂದಾಗಿ ಯಾವುದೇ ತೊಂದರೆಯಾಗಿರುವುದಿಲ್ಲ.<br>ಕಾರ್ಖಾನೆಯು ಸಹಕಾರ ಸಂಘಗಳ ಕಾಯ್ದೆಯಡಿ ನೊಂದಣಿಯಾಗಿದ್ದು, ತನ್ನದೇ ಆದ ಆಸ್ತಿ ಮತ್ತು ಜವಾಬ್ದಾರಿಗಳನ್ನು ಹೊಂದಿರುತ್ತದೆ. ಕಾರ್ಖಾನೆ ತನ್ನ ಪ್ರಮುಖ ಜವಾಬ್ದಾರಿಗಳನ್ನು ನಿರ್ವಹಿಸಲು ಬೇಕಾಗುವ ಸಂಪನ್ಮೂಲಗಳನ್ನು ಕ್ರೋಢೀಕರಿಸಿ ಪಾವತಿಸಬೇಕಾಗಿರುತ್ತದೆ. ಇದು ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ವಲಯದ ಕಾರ್ಖಾನೆಯಾಗಿರುವುದಿಲ್ಲ. ಆದ್ದರಿಂದ ಸರ್ಕಾರವು ಕಾರ್ಮಿಕರ ವೇತನ ಬಾಕಿ ಮತ್ತು ಇತರೆ ಪಾವತಿಗೆ ಪರಿಹಾರ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ. ಬದಲಾಗಿ ಕಾರ್ಖಾನೆಯೇ ಈ ಜವಾಬ್ದಾರಿಗಳನ್ನು ತೀರುವಳಿ ಮಾಡಬೇಕಾಗಿರುತ್ತದೆ.<br>ಈ ಕಾರ್ಖಾನೆಗೆ 2017-18ನೇ ಕಬ್ಬು ಅರೆಯುವ ಹಂಗಾಮಿನಲ್ಲಿ ಅಗತ್ಯವಿದ್ದ ದುಡಿಯುವ ಬಂಡವಾಳಕ್ಕಾಗಿ ರೂ.10.00 ಕೋಟಿಗಳ ಸಾಲವನ್ನು ಸಹಕಾರಿ ಅಪೆಕ್ಸ್ ಬ್ಯಾಂಕಿನಿಂದ ಪಡೆಯಲು ಸರ್ಕಾರವು ಖಾತರಿ ನೀಡಿರುತ್ತದೆ. ಇದಲ್ಲದೆ, 2018-19ನೇ ಸಾಲಿನಲ್ಲಿ ದುಡಿಯುವ ಬಂಡವಾಳಕ್ಕಾಗಿ ರೂ.20.00ಕೋಟಿಗಳ ಸಾಲವನ್ನು ನೀಡಿರುತ್ತದೆ. ಈ ಕಾರ್ಖಾನೆಗೆ ರಾಜ್ಯ ಸರ್ಕಾರದಿಂದ ಈವರೆಗೆ ರೂ.50.00 ಕೋಟಿಗಳಷ್ಟು ಆರ್ಥಿಕ ನೆರವನ್ನು ಸಾಲದ ರೂಪದಲ್ಲಿ ನೀಡಲಾಗಿದೆ. ಆದಾಗ್ಯೂ ಕಾರ್ಖಾನೆಯು ತನ್ನ ಸಾಮರ್ಥ್ಯಕ್ಕೆ ಅನುಗುಣವಾಗಿ ಕಬ್ಬು ಅರೆಯುವ ಕಾರ್ಯವನ್ನು ನಿರ್ವಹಿಸಿರುವುದಿಲ್ಲ. |

....2

<table>
<tr><td>ಇ)</td><td>ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ಮುಚ್ಚುವ ಅಥವಾ ಪುನರಾರಂಭಕ್ಕೆ ಸರ್ಕಾರದ ನಿಲುವೇನು;</td><td rowspan="3">ಆರ್ಥಿಕ ಸಂಕಷ್ಟದಿಂದ ಮತ್ತು ಇತರೆ ಕಾರಣಗಳಿಂದ ಸ್ಥಗಿತಗೊಂಡಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವುದರ ಮೂಲಕ ಪುನಃಶ್ಚೇತನಗೊಳಿಸುವುದು ಸರ್ಕಾರದ ಪ್ರಚಲಿತ ನೀತಿಯಾಗಿರುತ್ತದೆ. ಈ ಕಾರ್ಖಾನೆಯನ್ನು ಖಾಸಗಿಯವರಿಗೆ ಗುತ್ತಿಗೆ ನೀಡುವುದರ ಬಗ್ಗೆ ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕರಿಂದ ವರದಿ ಕೋರಲಾಗಿರುತ್ತದೆ. ವರದಿ ಬಂದ ನಂತರ ಸಾಧಕ-ಬಾಧಕಗಳನ್ನು ಪರಿಶೀಲಿಸಿ ಪುನಃಶ್ಚೇತನಗೊಳಿಸುವ ಬಗ್ಗೆ ಕ್ರಮವಿಡಲಾಗುವುದು.<br><br>ಹೊಸ ಸಕ್ಕರೆ ಕಾರ್ಖಾನೆ ಪ್ರಾರಂಭಿಸುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ.</td></tr>
<tr><td>ಈ)</td><td>ಬೀದರ್ ಸಹಕಾರಿ ಸಕ್ಕರೆ ಕಾರ್ಖಾನೆ ಪುನರಾರಂಭಿಸದಿದ್ದಲ್ಲಿ, ಹೊಸ ಕಾರ್ಖಾನೆ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)</td></tr>
<tr><td>ಉ)</td><td>ಬೀದರ್ ಸಕ್ಕರೆ ಕಾರ್ಖಾನೆಯನ್ನು ಲೀಜ್‌ಗೆ ನೀಡುವ ಉದ್ದೇಶ ಸರ್ಕಾರಕ್ಕೆ ಇದೆಯೇ: ಇದ್ದಲ್ಲಿ ಲೀಜ್ ನೀಡುವ ಉದ್ದೇಶ ಎಷ್ಟು ದಿನಗಳಲ್ಲಿ ಪೂರ್ಣಗೊಳ್ಳಲಿದೆ: ಎಷ್ಟು ದಿನಗಳಲ್ಲಿ ಪುನರಾರಂಭಕ್ಕೆ ಕ್ರಮ ಕೈಗೊಳ್ಳಲಾಗುವುದು?</td></tr>
</table>

ಸಂಖ್ಯೆ: ಸಿಐ 207 ಸಿಓಎಫ್ 2020

(ಅರಬೈಲ್ ಶಿವರಾಮ ಹೆಬ್ಬಾರ)
ಕಾರ್ಮಿಕ ಮತ್ತು ಸಕ್ಕರೆ ಸಚಿವರು